# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **1294 (1335)**
ಸದಸ್ಯರ ಹೆಸರು : ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 16.03.2026
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ವಿವರ</th></tr>
<tr><td>ಅ)</td><td>ಜನವರಿ 2016 ರಿಂದ ಮಾರ್ಚ್ 2024 ರವರೆಗೆ ರಾಜ್ಯ ಅನುದಾನಿತ ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಒಟ್ಟು ಖಾಲಿ ಹುದ್ದೆಗಳೆಷ್ಟು; (ವಿವರ ನೀಡುವುದು)</td><td rowspan="2">ಜನವರಿ 2016 ರಿಂದ ಮಾರ್ಚ್ 2024 ರವರೆಗೆ ರಾಜ್ಯ ಅನುದಾನಿತ ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿಯಿರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ;<br><table><tr><td>ರಾಜ್ಯ ಅನುದಾನಿತ ಪ್ರೌಢಶಾಲಾ</td><td>4130</td></tr><tr><td>ಪದವಿ ಪೂರ್ವ ಕಾಲೇಜು</td><td>5206</td></tr></table></td></tr>
<tr><td>ಆ)</td><td>ಜನವರಿ 2016 ರಿಂದ ಮಾರ್ಚ್ 2024 ರವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಹುದ್ದೆಗಳೆಷ್ಟು; (ವಿವರ ನೀಡುವುದು)</td></tr>
<tr><td>ಇ)</td><td>2015 ಕ್ಕೂ ಮುನ್ನ ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಈಗಾಗಲೇ ಅನುಮತಿ ನೀಡಿ ವೇತನಾನುದಾನಕ್ಕೊಳಪಟ್ಟಿರುವ ಹುದ್ದೆಗಳೆಷ್ಟು; ಇಲಾಖಾ ಅನುಮತಿ ನೀಡಿ ಇದುವರೆವಿಗೆ ವೇತನಾನುದಾನಕ್ಕೊಳಪಡಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸದಿರಲು ಕಾರಣಗಳೇನು;</td><td rowspan="2">2015ಕ್ಕೂ ಮುನ್ನ ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಒಟ್ಟು 2461 ಹುದ್ದೆಗಳಿಗೆ ಅನುಮತಿ ನೀಡಿ ವೇತನಾನುದಾನಕ್ಕೆ ಒಳಪಡಿಸಲಾಗಿರುತ್ತದೆ.<br><br>ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022ನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಗಿರುವ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೆ ಒಳಪಟ್ಟು ಹಾಗೂ ಸರ್ಕಾರದ ಮುಂದಿನ ಆದೇಶದವರೆಗೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ನೇಮಕಾತಿ ಅಧಿಸೂಚನೆಗಳನ್ವಯ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲು ಸಿಆಸು ಇಲಾಖೆಯು ಆದೇಶ ಸಂಖ್ಯೆ: ಸಿಆಸುಇ 01 ಸೆಹಿಮ 2026, ದಿನಾಂಕ: 27.02.2026ರಲ್ಲಿ ಹಲವು ಷರತ್ತುಗಳನ್ನು ವಿಧಿಸಿ ಅದರನ್ವಯ ಕ್ರಮವಹಿಸುವಂತೆ ಎಲ್ಲಾ ನೇಮಕಾತಿ/ಆಯ್ಕೆ ಪ್ರಾಧಿಕಾರಿಗಳಿಗೆ ಸೂಚನೆಯನ್ನು ನೀಡಲಾಗಿದ್ದು, ಈ ಆದೇಶದನ್ವಯ ಶಾಲಾ ಆಡಳಿತ ಮಂಡಳಿಗಳಿಂದ ಪ್ರಸ್ತಾವನೆಗಳನ್ನು ನಿರೀಕ್ಷಿಸಲಾಗಿದೆ.</td></tr>
<tr><td>ಈ)</td><td>ಡಿಸೆಂಬರ್ 2015 ರವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಎಲ್ಲಾ ಖಾಲಿ ಇರುವ ಹುದ್ದೆಗಳನ್ನು ತುಂಬಲು ಯಾವಾಗ ಅನುಮತಿ ನೀಡಲಾಗುತ್ತದೆ?</td></tr>
</table>

**ಸಂಖ್ಯೆ: ಇಪಿ 94 ಎಸ್‌ಇಎಸ್ 2026**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು